ಕರ್ನಾಟಕ ಸರ್ಕಾರ

ಜನವರಿ 2, 2018

ಬೆಂಗಳೂರು, ಜನವರಿ 2:

ರಾಜ್ಯ ವಿಧಾನ ಮಂಡಲದ ಜಂಟಿ ಅಧಿವೇಶನ ಫೆಬ್ರವರಿ 5 ರಂದು ರಾಜ್ಯಪಾಲರ ಭಾಷಣದೊಂದಿಗೆ ಆರಂಭಗೊಂಡು, ಫೆಬ್ರವರಿ 9 ರಂದು ರಾಜ್ಯ ಸರ್ಕಾರದ ಉತ್ತರದೊಂದಿಗೆ ಸಮಾಪನಗೊಳ್ಳಲು ರಾಜ್ಯ ಸಚಿವ ಸಂಪುಟ ಸಮ್ಮತಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಹತ್ವಯುತ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ ಬಿ ಜಯಚಂದ್ರ ಅವರು ಪತ್ರಿಕಾಗೋಷ್ಠಿಯಲ್ಲಿ ಪ್ರಕಟಿಸಿದರು.

ಐದು ದಿನಗಳ ಜಂಟಿ ಅಧಿವೇಶನದ ನಂತರ, ಫೆಬ್ರವರಿ 16 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಆರನೇ ಹಾಗೂ ತಮ್ಮ ಹದಿಮೂರನೇ ಮುಂಗಡ ಪತ್ರವನ್ನು ಮಂಡಿಸಲಿದ್ದಾರೆ. ಫೆಬ್ರವರಿ 28 ರವರೆಗೆ ಕಲಾಪ ನಡೆಸಲು ಸಚಿವ ಸಂಪುಟ ತೀರ್ಮಾನಿಸಿದೆ.

## ಮುಂಬಡ್ತಿ ಪ್ರಕ್ರಿಯೆ ಮುಂದೂಡಿಕೆ

ರಾಜ್ಯ ಸರ್ಕಾರದ ನಾಗರೀಕ ಸೇವೆಯ ವಿವಿಧ ವೃಂದದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾಮಾನ್ಯ ವರ್ಗದ ಅಧಿಕಾರಿ ಮತ್ತು ಸಿಬ್ಬಂದಿಯ ಮುಂಬಡ್ತಿ ಪ್ರಕ್ರಿಯೆಯನ್ನು ಜನವರಿ 15 ರ ವರೆಗೆ ಮುಂದೂಡಲು ಸಂಪುಟ ಸಮ್ಮತಿಸಿದೆ. ಪ್ರಕರಣ ನ್ಯಾಯಾಲಯದಲ್ಲಿರುವುದರಿಂದ ಮುಂಬಡ್ತಿಗೆ ಪ್ರಕ್ರಿಯೆಗೆ ತಾತ್ಕಾಲಿಕ ತಡೆ ನೀಡಲು ಸಂಪುಟ ನಿರ್ಧರಿಸಿದೆ.

## ನ್ಯಾಯಾಧೀಶರ ಸೇವಾವಧಿ ವಿಸ್ತರಣೆ

ರಾಜ್ಯ ಲೋಕಾಯುಕ್ತ ಸಂಸ್ಥೆಯಲ್ಲಿನ ಅಪರ ನಿಬಂಧಕರ ಹುದ್ದೆಗಳಲ್ಲಿ ಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಆರು ನ್ಯಾಯಾಧೀಶರ ಸೇವಾವಧಿಯನ್ನು ಒಂದು ವರ್ಷಗಳ ಅವಧಿಗೆ ವಿಸ್ತರಿಸಲು ಸಂಪುಟ ಅನುಮೋದನೆ ನೀಡಿದೆ.

## ತಿದ್ದುಪಡಿಗೆ ಒಪ್ಪಿಗೆ

ರಾಜ್ಯ ಸರ್ಕಾರಿ ನೌಕರರು ಪತ್ನಿ, ಮಕ್ಕಳು ಹಾಗೂ ತಂದೆ–ತಾಯಿ ಒಳಗೊಂಡಂತೆ ಸ್ಥಿರ ಮತ್ತು ಚರ ಆಸ್ತಿಗಳ ಸವಿವರ ಮಾಹಿತಿಗಳನ್ನು ನಮೂನೆ–4 ರಲ್ಲಿ ಕಡ್ಡಾಯವಾಗಿ ಒದಗಿಸಲು ಕರ್ನಾಟಕ ಲೋಕಾಯುಕ್ತ ಕಾಯಿದೆ–1985 ರ ಪರಿಚ್ಛೇಧ 7 ರ ತಿದ್ದುಪಡಿಗೆ ಸಂಪುಟ ಒಪ್ಪಿಗೆ ನೀಡಿದೆ.

## ವಿಧೇಯಕಕ್ಕೆ ಅನುಮೋದನೆ

ಕೇಂದ್ರ ಸರ್ಕಾರಿ ಸೇವೆಗಳ ಸೌಲಭ್ಯ ಪಡೆಯಲು ಆಧಾರ್ ಜೋಡಣೆ ಕಡ್ಡಾಯ ಮಾಡಿರುವ ಮಾದರಿಯಲ್ಲೇ ರಾಜ್ಯ ಸರ್ಕಾರಿ ಸೇವೆಗಳ ಸೌಲಭ್ಯಗಳನ್ನು ಪಡೆಯಲು ಅನುವಾಗುವಂತೆ ಕರ್ನಾಟಕ ರಾಜ್ಯ ಆಧಾರ್ ಆರ್ಥಿಕ ಮತ್ತು ಇತರ ಸಹಾಯಧನಗಳ ವಿತರಣೆ, ಪ್ರಯೋಜನಗಳು ಹಾಗೂ ಸೇವೆಗಳು ವಿಧೇಯಕ–2017 ಕ್ಕೆ ಸಂಪುಟ ಅನುಮೋದನೆ ನೀಡಿದೆ.

## ಮಾರ್ಗಸೂಚಿಗಳ ಬದಲಾವಣೆಗೆ ಒಪ್ಪಿಗೆ

ಮುಖ್ಯಮಂತ್ರಿಯವರ ಸ್ವಯಂ ಉದ್ಯೋಗ ಯೋಜನೆಯ ಮಾರ್ಗಸೂಚಿಗಳಿಗೆ ಬದಲಾವಣೆ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಬದಲಾದ ಮಾರ್ಗಸೂಚಿಗಳಂತೆ ಫೋಟೋ ಸ್ಟೂಡಿಯೋ, ಝುರಾಕ್ಸ್ ಅಂಗಡಿ, ಸಣ್ಣ ಪ್ರಮಾಣದ ಹೋಟೆಲ್‌ಗಳು, ಐಸ್‌ಕ್ರೀಂ ಪಾರ್ಲರ್‌ಗಳು, ಸಲೂನ್ ಮತ್ತು ಸ್ಪಾ ಒಳಗೊಂಡಂತೆ ಸ್ವ–ಉದ್ಯೋಗ ಆರಂಭಿಸಲು ಹತ್ತು ಲಕ್ಷ ರೂ ಬಂಡವಾಳ ಒದಗಿಸಲು ಸಂಪುಟ ಸಮ್ಮತಿಸಿದೆ.

## ಕಲ್ಮಷಗಳ ತ್ಯಾಜ್ಯ ಸಂಸ್ಕರಣಾ ಮತ್ತು ನಿರ್ವಹಣಾ ನೀತಿ

ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಹತ್ತು ನಗರಗಳಲ್ಲಿ ತ್ಯಾಜ್ಯ ಸಂಸ್ಕರಣೆ ಮತ್ತು ನಿರ್ವಹಣೆ ಮಾಡಲು ಕಲುಷಿತ ನೀರು ಸಂಸ್ಕರಣೆ ಮತ್ತು ನಿರ್ವಹಣೆಗೆ ಅನುವಾಗುವಂತೆ ಕಲ್ಮಷಗಳ ತ್ಯಾಜ್ಯ ಸಂಸ್ಕರಣಾ ಮತ್ತು ನಿರ್ವಹಣಾ ನೀತಿಯನ್ನು ರಾಜ್ಯದಲ್ಲಿ ಜಾರಿಗೆ ತರಲು ಸಂಪುಟ ಸಮ್ಮತಿಸಿದೆ.

ಮೈಸೂರು ನಗರದಲ್ಲಿ ನಿರ್ಮಾಣವಾಗುತ್ತಿರುವ ಡಾ ಬಿ. ಆರ್. ಅಂಬೇಡ್ಕರ್ ಭವನ ಕಾಮಗಾರಿಗಳಿಗೆ ಪರಿಷ್ಕೃತ 20.60 ಕೋಟಿ ಅಂದಾಜು ವೆಚ್ಚಕ್ಕೆ ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಮೈಕ್ರೋ ಲೆವೆಲ್ ಪ್ಲಾನಿಂಗ್ – ಮಾಸ್ಟರ್ ಪ್ಲಾನ್‌ಗೆ ಅನುಮೋದನೆ

ರಾಜ್ಯದ ಹತ್ತು ನಗರಗಳಲ್ಲಿ ಸೂಕ್ಷ್ಮ ಮಟ್ಟದ ಯೋಜನೆಯನ್ನು (ಮೈಕ್ರೋ ಲೆವೆಲ್ ಪ್ಲಾನಿಂಗ್) ಸಿದ್ದಪಡಿಸಿ ಮಹಾ ಯೋಜನೆ (ಮಾಸ್ಟರ್ ಪ್ಲಾನ್) ತಯಾರಿಸಲು 60 ಕೋಟಿ ರೂ ಪರಿಷ್ಕೃತ ಅಂದಾಜಿಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಗುತ್ತಿಗೆ ದರ ನಿಗದಿ

ದಾವಣಗೆರೆ ಮತ್ತು ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದಿಂದ ಶಾಮನೂರು ಗ್ರಾಮದ ಮಾರ್ಕಂಡೇಶ್ವರ ಪದ್ಮಶಾಲಿ ಸಮಾಜ ಸೇವಾ ಸಂಘಕ್ಕೆ 381.41 ಚದುರ ಮೀಟರ್ ನಿವೇಶನಕ್ಕೆ ಗುತ್ತಿಗೆ ದರವನ್ನು ಮಾರ್ಗಸೂಚಿ ದರದ ಶೇಕಡಾ 50 ರಷ್ಟು ದರಕ್ಕೆ ನಿಗದಿಪಡಿಸಲು ಸಂಪುಟ ಒಪ್ಪಿಗೆ ನೀಡಿದೆ.

## ಅಂಗನವಾಡಿ ಫಲಾನುಭವಿಗಳಿಗೆ ಆಹಾರ ಪದಾರ್ಥಗಳ ಸರಬರಾಜು

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಆಹಾರ ಪದಾರ್ಥಗಳನ್ನು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಹಾಗೂ ಜನತಾ ಬಜಾರ್ ಮೂಲಕ ಸರಬರಾಜು ಮಾಡಲು ಸಂಪುಟ ಸಮ್ಮತಿಸಿದೆ.

## ಗುಚ್ಛವಾರು ವಿಮಾ ಸಂಸ್ಥೆಗಳ ನಿಗದಿ

ಪ್ರಸಕ್ತ ಸಾಲಿನ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಹಾಗೂ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ಅನುಷ್ಠಾನ ಕುರಿತಂತೆ ಗುಚ್ಛವಾರು (ಕ್ಲಸ್ಟರ್–ವೈಸ್) ವಿಮಾ ಸಂಸ್ಥೆಗಳನ್ನು ನಿಗದಿಪಡಿಸಿ ಹೊರಡಿಸಿರುವ ಆದೇಶಕ್ಕೆ ಸಂಪುಟ ಒಪ್ಪಿಗೆ ನೀಡಿದೆ.

## ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲು ಅನುಮೋದನೆ

ರಾಜ್ಯ ಆಗ್ರೋ ಕಾರ್ನ್ ಪ್ರಾಡಕ್ಟ್ ಲಿಮಿಟೆಡ್ ಮತ್ತು ಫೆವರಿಚ್ ಅಗ್ರೋ ಪ್ರೈವೇಟ್ ಲಿಮಿಟೆಡ್ ನಡುವೆ ಇರುವ ವ್ಯಾಜ್ಯವನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸುವ ಕೃಷಿ ಇಲಾಖೆಯ ಪ್ರಸ್ತಾವಕ್ಕೆ ಸಂಪುಟ ಅನುಮೋದನೆ ನೀಡಿದೆ. ಅದರಂತೆ, ಜಮೀನು ಸರ್ಕಾರದ ವಶಕ್ಕೆ ಹಾಗೂ ಉಳಿದ ಯಂತ್ರೋಪಕರಣ ಸಂಸ್ಥೆಗೆ ಬಿಟ್ಟು ಕೊಡಲು ಸಂಪುಟ ಸಮ್ಮತಿಸಿದೆ.

**ಅಲೆ ತಡೆಗೋಡೆ ನಿರ್ಮಾಣಕ್ಕೆ ಒಪ್ಪಿಗೆ**

ಉತ್ತರ ಕನ್ನಡ ಜಿಲ್ಲೆಯ ಭಟ್ಕಳ ತಾಲ್ಲೂಕಿನ ತೆಂಗಿನಗುಂಡಿ–ಅಳ್ವೆಕೋಡಿಯ ಮೀನುಗಾರಿಕಾ ಇಳಿದಾಣ ಕೇಂದ್ರದ ಬಳಿ 86.08 ಕೋಟಿ ರೂ ವೆಚ್ಚದಲ್ಲಿ ಅಲೆ ತಡೆಗೋಡೆ (ಬ್ರೇಕ್ ವಾಟರ್) ನಿರ್ಮಿಸಲು ಸಂಪುಟ ಒಪ್ಪಿಗೆ ನೀಡಿದೆ.

**ಕೃಷಿ ಇಲಾಖೆಯ ಜಮೀನು ಕಂದಾಯ ಇಲಾಖೆಗೆ**

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಗುಡ್ನಾಪುರ ಗ್ರಾಮದ ಕೃಷಿ ಇಲಾಖೆಯ 14.03 ಎಕರೆ ಜಮೀನಿನಲ್ಲಿ ಹಳಿಯಾಳ ಪಟ್ಟಣ ಅಭಿವೃದ್ಧಿ ಮತ್ತು ಸರ್ಕಾರಿ ಕಟ್ಟಡಗಳ ನಿರ್ಮಾಣಕ್ಕೆ ಕಂದಾಯ ಇಲಾಖೆಗೆ ಹಸ್ತಾಂತರಿಸಲು ಸಂಪುಟ ಸಮ್ಮತಿಸಿದೆ.

**ಬೈಸಿಕಲ್ ಖರೀದಿಗೆ ಅನುಮೋದನೆ**

ಮುಂದಿನ ಶೈಕ್ಷಣಿಕ ವರ್ಷ ಅಂದರೆ 2018–19 ನೇ ಸಾಲಿನಿಂದ ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ಎಂಟನೇ ತರಗತಿಯಲ್ಲಿ ಅಧ್ಯಯನ ಮಾಡುವ ಎಲ್ಲಾ ವಿದ್ಯಾರ್ಥಿಗಳಿಗೆ 185 ಕೋಟಿ ರೂ ವೆಚ್ಚದಲ್ಲಿ ಬೈಸಿಕಲ್ ಖರೀದಿಸಿ ಉಚಿತ ವಿತರಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಘೋಷಾ ಆಸ್ಪತ್ರೆ ಅಭಿವೃದ್ಧಿಗೆ ಆಡಳಿತಾತ್ಮಕ ಅನುಮೋದನೆ**

ಬೆಂಗಳೂರಿನ ಹಾಜಿ ಸರ್ ಇಸ್ಮೈಲ್ ಸೇಠ್ ಘೋಷಾ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಆಸ್ಪತ್ರೆಯನ್ನು 16.64 ಕೋಟಿ ರೂ ಹೆಚ್ಚುವರಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ರೈಲ್ವೇ ಮೇಲು ಸೇತುವೆ ಹಾಗೂ ಕೂಡು ರಸ್ತೆ ನಿರ್ಮಾಣಕ್ಕೆ ಅನುಮೋದನೆ**

ಹೊಸಪೇಟೆ ಬಳ್ಳಾರಿ ರೈಲು ನಿಲ್ದಾಣದ ವ್ಯಾಪ್ತಿಯಲ್ಲಿನ ಕುಡುತಿನ ಯಾರ್ಡ್‌ನಲ್ಲಿ 26.36 ಕೋಟಿ ರೂ ಅಂದಾಜು ವೆಚ್ಚದಲ್ಲಿ ರೈಲ್ವೇ ಮೇಲು ಸೇತುವೆ ಹಾಗೂ ಕೂಡು ರಸ್ತೆ ನಿರ್ಮಾಣ ಮಾಡಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಆಶಾ ದೀಪ ಯೋಜನೆಗೆ ಸಮ್ಮತಿ**

ರಾಜ್ಯ ಆಯವ್ಯಯದಲ್ಲಿ ಘೋಷಿಸಿರುವಂತೆ ಕಾರ್ಮಿಕ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಹತ್ತು ಸಾವಿರ ಫಲಾನುಭವಿಗಳಿಗೆ 40 ಕೋಟಿ ರೂ ವೆಚ್ಚದಲ್ಲಿ ಆಶಾದೀಪ ಯೋಜನೆಯನ್ನು ಜಾರಿಗೊಳಿಸಲು ಸಚಿವ ಸಂಪುಟ ಸಮ್ಮತಿ ಸೂಚಿಸಿದೆ.

ಅದರಂತೆ ಖಾಸಗಿ ವಲಯದಲ್ಲಿ ಉದ್ಯೋಗ ಪಡೆಯುವ ಸಿಬ್ಬಂದಿಗೆ ಮೊದಲ ಎರಡು ವರ್ಷಗಳ ಖಾಯಂಪೂರ್ವ ಅವಧಿಯಲ್ಲಿ ನೌಕರರ ವಿಮಾ ಕಂತನ್ನು ಸರ್ಕಾರವೇ ಪಾವತಿಸಲಿದೆ.

**ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಸಮಗ್ರ ತಿದ್ದುಪಡಿ ವಿಧೇಯಕಕ್ಕೆ ಅನುಮೋದನೆ**

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಸಮಗ್ರ ತಿದ್ದುಪಡಿ ವಿಧೇಯಕ–2017 ಕ್ಕೆ ಸಂಪುಟ ಒಪ್ಪಿಗೆ ನೀಡಿದೆ. ಅದೇ ರೀತಿ, ಕೊಪ್ಪಳ ತಾಲ್ಲೂಕಿನ ಗುನ್ನಾಳ ಗ್ರಾಮದಲ್ಲಿ 18.5 ಕೋಟಿ ರೂ ವೆಚ್ಚದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಮತ್ತು ವಿದ್ಯಾರ್ಥಿನಿಲಯ ಪ್ರಾರಂಭಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಅಂತೆಯೇ, ಕರ್ನಾಟಕ ಕಾನೂನು ವಿಶ್ವವಿದ್ಯಾಲಯ ವಿಧೇಯಕ–2017 ಕ್ಕೆ ಸಂಪುಟ ಅನುಮೋದನೆ ನೀಡಿದೆ.

**ಬಹು ಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ**

ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಹಾಗೂ ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ 89 ಜನವಸತಿಗಳಿಗೆ 54.73 ಕೋಟಿ ರೂ ವೆಚ್ಚದಲ್ಲಿ ಬಹು ಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಆಡಳಿತಾತ್ಮಕ ಯೋಜನೆಗೆ ಸಂಪುಟ ಅನುಮೋದನೆ ನೀಡಿದೆ.

**ಜಮೀನಿಗೆ ದರ ನಿಗದಿ**

ಹೇಮಾವತಿ ಜಲಾಶಯದ ಹಿನ್ನೀರು ಯೋಜನೆಯ ಮುಳುಗಡೆಯ ಪ್ರದೇಶದ 15 ಸಂತ್ರಸ್ತ ಕುಟುಂಬಗಳಿಗೆ ಕೊಡಗು ಜಿಲ್ಲೆಯ ಸೋಮವಾರ ಪೇಟೆ ತಾಲ್ಲೂಕಿನ ಕೊಡ್ಲಿಪೇಟೆ ಹೋಬಳಿಯಲ್ಲಿ ಮಂಜೂರು ಮಾಡಿದ ಜಮೀನಿಗೆ ದರ ನಿಗದಿ ಮಾಡಲು ಸಂಪುಟ ಸಮ್ಮತಿಸಿದೆ.

ಇಂಡಿ ಪಟ್ಟಣಕ್ಕೆ ತಾಕಳೆ–ಧೂಳಖೇಡ್ ಬ್ಯಾರೇಜ್ ನಿಂದ ನಿರಂತರ ನೀರು ಪೂರೈಕೆ ಮತ್ತು ನೀರಿನ ಮೂಲ ಸುಧಾರಣೆಗೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ 90.49 ಕೋಟಿ ರೂ ವೆಚ್ಚದಲ್ಲಿ ನಿರ್ಮಾಣ ಮಾಡಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**ಸಿಮೆಂಟ್ ಕಾರ್ಖಾನೆಗೆ ಜಮೀನು ಮಂಜೂರು**

ಕಲಬುರಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಕರ್ಚ್‌ಖೇಡಾ ಗ್ರಾಮದಲ್ಲಿ ವಿಕಟಸಾಗರ ಸಿಮೆಂಟ್ ಕಾರ್ಖಾನೆಗೆ 84 ಎಕರೆ ಜಮೀನು ಮಂಜೂರು ಮಾಡಿ ಸರ್ವೆ ಸಂಖ್ಯೆ 67. 68, 69, 77 ಮತ್ತು 79 ರಲ್ಲಿ ಖರೀದಿಸಿರುವ ಭೂಮಿಗೆ ಸರ್ಕಾರಕ್ಕೆ ಬಿಟ್ಟು ಕೊಡಲು ಹಾಗೂ ಸರ್ವೆ ಸಂಖ್ಯೆ : 46, 54, 56 ಹಾಗೂ 84 ಜಮೀನನ್ನು ಕಾರ್ಖಾನೆಗೆ ಮಂಜೂರು ಮಾಡಲು ಸಂಪುಟ ಸಮ್ಮತಿಸಿದೆ.

## ಸಹಾಯ ಧನದಲ್ಲಿ ಹೆಚ್ಚಳ

ನೀರಿನ ಟ್ಯಾಂಕರ್ ಖರೀದಿಗೆ ರಾಜ್ಯ ಸರ್ಕಾರ ರೈತ ಸಮುದಾಯಕ್ಕೆ ನೀಡುತ್ತಿದ್ದ ಸಹಾಯಧನ ಮೊತ್ತವನ್ನು 80,000 ರೂ ನಿಂದ 1.12 ಲಕ್ಷ ರೂ ಗಳಿಗೆ ಹೆಚ್ಚಿಸಲು ಸಂಪುಟ ನಿರ್ಧರಿಸಿದೆ.

ಮಹಾರಾಣಿ ವಿಶ್ವವಿದ್ಯಾಲಯಕ್ಕೆ ಸಂಬಂಧಪಟ್ಟ ಕಟ್ಟಡ ಕಾಮಗಾರಿಗಳನ್ನು 45.69 ಕೋಟಿ ರೂ. ವೆಚ್ಚದಲ್ಲಿ ಅಂದಾಜು ಮೊತ್ತದ ಕಾಮಗಾರಿ ಕೈಗೆತ್ತಿಗೊಳ್ಳಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಹೈ ಕೋರ್ಟ್‌ಸಿಬ್ಬಂದಿಗೆ ಕೇಂದ್ರ ವೇತನ ಶ್ರೇಣಿ

ಸರ್ವೋಚ್ಚ ನ್ಯಾಯಾಲಯದ ಸೂಚನೆಯ ಮೇರೆಗೆ ಕರ್ನಾಟಕ ಉಚ್ಚ ನ್ಯಾಯಾಲಯದ ಸಿಬ್ಬಂದಿಗೆ 2004 ರಿಂದ ಪೂರ್ವಾನ್ವಯವಾಗುವಂತೆ ಕೇಂದ್ರ ಸರ್ಕಾರದ ವೇತನ ಶ್ರೇಣಿಯನ್ನು ಮಂಜೂರು ಮಾಡಲು ಸಂಪುಟ ಸಮ್ಮತಿಸಿದೆ. ಇದರಿಂದ ರಾಜ್ಯ ಸರ್ಕಾರಕ್ಕೆ 350 ಕೋಟಿ ರೂ ಹೊರೆ ಬೀಳಲಿದೆ.

ಕರ್ನಾಟಕ ಆಡಳಿತ ಸೇವಾ ( ಕೆ ಎ ಎಸ್ )ಅಧಿಕಾರಿಗಳ ವೃಂದ ನೇಮಕಾತಿ ನಿಯಮಾವಳಿಗಳ ಪರಿಷ್ಕರಣೆಗೆ ಸಂಪುಟ ಒಪ್ಪಿಗೆ ನೀಡಿದೆ. ಆಕ್ಷೇಪಣೆಗಳನ್ನು ಸ್ವೀಕರಿಸಿದ ನಂತರ ಅಧಿಸೂಚನೆ ಹೊರಡಿಸಲಾಗುವುದು.

ಮೈಸೂರು ಜಿಲ್ಲೆಯ ಟಿ. ನರಸೀಪುರ ತಾಲ್ಲೂಕು ಹೊಳೆಸಾಲು ಗ್ರಾಮದ ಸರ್ವೇ ಸಂಖ್ಯೆ : 807 ಮತ್ತು 808 ರ ಪಕ್ಕದಲ್ಲಿರುವ ಕಾವೇರಿ ನದಿ ಪಾತ್ರದ ಮೂರು ಎಕರೆ ಜಮೀನನ್ನು ಮೆ: ಕಾರ್ತಿಕ್ ಎನರ್ಜಿ ರಿಸೋರ್ಸಸ್ ಪ್ರೈ ಲಿಮಿಟೆಡ್‌ಗೆ ಕಿರು ವಿದ್ಯುತ್ ಯೋಜನೆಗಾಗಿ ಗುತ್ತಿಗೆ ಆಧಾರದ ಮೇಲೆ ನೀಡಲು ಸಚಿವ ಸಂಪುಟ ಸಮ್ಮತಿ ನೀಡಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ಗೌತಮಪುರ ಮತ್ತು ಇತರೆ 127 ಜನವಸತಿಗಳಿಗೆ 66.10 ಕೋಟಿ ರೂ. ವೆಚ್ಚದಲ್ಲಿ ಬಹು ಗ್ರಾಮ ಯೋಜನೆಯಡಿ ಕುಡಿಯುವ ನೀರು ಸರಬರಾಜು ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಉತ್ತರ ಕನ್ನಡ ಜಿಲ್ಲೆಯ ಕುಮುಟಾ ತಾಲ್ಲೂಕಿನ ಗೋಕರ್ಣ ಮತ್ತು ಇತರೆ ಏಳು ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ 24.50 ಕೋಟಿ ರೂ. ವೆಚ್ಚದ ಪರಿಷ್ಕೃತ ಅಂದಾಜಿಗೆ ಸಂಪುಟ ಸಮ್ಮತಿಸಿದೆ.

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ತೇರಗಾಂವ, ಕಾವಲವಾಡ ಮತ್ತು 91 ಗ್ರಾಮಗಳಿಗೆ 102.52 ಕೋಟಿ ರೂ. ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೋರು ತಾಲ್ಲೂಕಿನ ಪಟ್ಟಣ ಮತ್ತು ಜನವಸತಿಗಳು ಚೆಳ್ಳಕೆರೆ ತಾಲ್ಲೂಕಿನ ಜನವಸತಿಗಳು, ಬಳ್ಳಾರಿ ಜಿಲ್ಲೆಯ ಕೂಡ್ಲಗಿ ತಾಲ್ಲೂಕಿನ ಉಜ್ಜನಿ ಮತ್ತು 216 ಜನವಸತಿಗಳು, ಹೊಸಕೋಟೆ ತಾಲ್ಲೂಕಿನ ಚಿಮ್ಮನಕಟ್ಟೆ ಮತ್ತು 14 ಜನವಸತಿಗಳು ಹಾಗೂ ಚಿತ್ರದುರ್ಗ ಜಿಲ್ಲೆಯ ತುರುವನೂರು ಹೋಬಳಿಯ 59 ಜನವಸತಿಗಳಿಗೆ 2352.60 ಕೋಟಿ ರೂ. ಅಂದಾಜು ವೆಚ್ಚದ ಕುಡಿಯುವ ನೀರು ಯೋಜನೆಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

ಮೈಸೂರಿನ 245 ವೀಳ್ಯದೆಲೆ ಬೆಳೆಗಾರರಿಗೆ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವೀಳ್ಯದೆಲೆ ಬೆಳೆಯುವ ಸಲುವಾಗಿ ತಲಾ ಐದು ಗುಂಟೆ ಜಮೀನಿನಂತೆ ಒಟ್ಟು 30 ಎಕರೆ 25 ಗುಂಟೆ ಜಮೀನನ್ನು ಹಂಚಿಕೆ ಮಾಡಲು ಸಂಪುಟ ಒಪ್ಪಿಗೆ ನೀಡಿದೆ

ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ ರಸ್ತೆ ನಿರ್ಮಾಣಕ್ಕೆ ಭೂ-ಸ್ವಾಧೀನ ಪಡಿಸಿಕೊಂಡಿರುವ 321.10 ಎಕರೆ ಜಮೀನನ್ನು 50 : 50 ಮಾದರಿಯಲ್ಲಿ ಪರಿಹಾರ ಮತ್ತು ಅಭಿವೃದ್ಧಿ ಹೊಂದಿದ ಭೂಮಿಯನ್ನು ನೀಡಲು ಸಂಪುಟ ಸಮ್ಮತಿಸಿದೆ

ಬೆಂಗಳೂರಿನ ವಿಧಾನ ಸೌಧ, ಮಹಾತ್ಮ ಗಾಂಧಿ ರಸ್ತೆ, ಇಂದಿರಾ ನಗರ, ಕೋರಮಂಗಲ, ಹೆ ಎಸ್ ಆರ್ ಬಡಾವಣೆ, ಹೆಚ್ ಬಿ ಆರ್ ಬಡಾವಣೆಗಳಲ್ಲಿ 80.18 ಕೋಟಿ ರೂ ವೆಚ್ಚದಲ್ಲಿ ಪಾರ್ಕಿಂಗ್ ಹಬ್ ಮತ್ತು ಸೈಕಲ್ ಟ್ರ್ಯಾಕ್ ನಿರ್ಮಾಣ ಮಾಡಿ ಬೈಸಿಕಲ್ ಬಳಕೆಯನ್ನು ಜನಪ್ರಿಯಗೊಳಿಸಲು ಸಂಪುಟ ನಿರ್ಧರಿಸಿದೆ ಎಂದು ಜಯಚಂದ್ರ ಅವರು ಸವಿವರ ಮಾಹಿತಿ ನೀಡಿದರು.

***********

ಡಿ ಪಿ ಎಂ